**ಕರ್ನಾಟಕ ವಿಧಾನಸಭೆ**
**ಹದಿನಾರನೇ ವಿಧಾನಸಭೆ**
**ಏಳನೇ ಅಧಿವೇಶನ**

# ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–58)**

ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ ಸಂ. 36)ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ ಸಂ.36) ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ ;

ಇದು, ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ 36) ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೆ ಜಾರಿಗೆ ಬರತಕ್ಕದ್ದು.

**2. ಪ್ರಕರಣ 8ರ ತಿದ್ದುಪಡಿ.-** ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ 36) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ)ರಲ್ಲಿನ 8ನೇ ಪ್ರಕರಣದ (2)ನೇ ಉಪಪ್ರಕರಣಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(2) ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಈ ಅಧಿನಿಯಮದ ಉಪಬಂಧಗಳನುಸಾರ ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು."

**3. ಪ್ರಕರಣ 14ರ ತಿದ್ದುಪಡಿ.-** ಮೂಲ ಅಧಿನಿಯಮದ 14ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿನ "ನಗರ ಪಾಲಿಕೆಗಳ ಆಡಳಿತಾತ್ಮಕ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು ಮತ್ತು ಅಧಿಕಾರಗಳನ್ನು ಚಲಾಯಿಸತಕ್ಕದ್ದು" ಎಂಬ ಪದಗಳಿಗೆ ಬದಲಾಗಿ "ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪ್ರಕಾರ್ಯಗಳ ಕುರಿತು ಸ್ಪಷ್ಟತೆಯನ್ನು ನೀಡಲು ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ ಸಂ. 36)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

## **ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಡಿ.ಕೆ ಶಿವಕುಮಾರ್**
ಉಪ ಮುಖ್ಯಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

**ಅನುಬಂಧ**

**ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ 36) ಉದ್ಧೃತ ಭಾಗ**

**XXX XXX XXX**

**8. ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿನ ನಾಗರಿಕ ಪ್ರಾಧಿಕಾರಗಳ ನಡುವಿನ ಸಂಬಂಧ.-** (1) ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿನ ನಾಗರಿಕ ಪ್ರಾಧಿಕಾರಗಳು ಈ ಅಧಿನಿಯಮದ ಹಾಗೂ ಅದರಡಿ ರಚಿಸಿದ ನಿಯಮಗಳು ಮತ್ತು ವಿನಿಯಮಗಳ ಅಡಿಯಲ್ಲಿ ಅವುಗಳಲ್ಲಿ ನಿಹಿತವಾದ ಅಧಿಕಾರಗಳು ಮತ್ತು ಪ್ರಕಾರ್ಯಗಳ ಅನುಸಾರವಾಗಿ ಅವುಗಳ ನಿರ್ದಿಷ್ಟ ಕ್ಷೇತ್ರವ್ಯಾಪ್ತಿಗಳಲ್ಲಿ (domain) ತಮ್ಮ ಅಧಿಕಾರವನ್ನು ಚಲಾಯಿಸತಕ್ಕದ್ದು.

(2) ಗ್ರೇಟರ್ ಬೆಂಗಳೂರು ಪ್ರಾಧಿಕಾರವು, ಈ ಅಧಿನಿಯಮದ ಅಡಿಯಲ್ಲಿ ಸೃಜಿಸಲಾದ ನಗರ ಪಾಲಿಕೆಗಳಿಗೆ ಸಂಬಂಧಿಸಿದಂತೆ ಈ ಅಧಿನಿಯಮದ ಉಪಬಂಧಗಳ ಅನುಸಾರ ಅಂಥ ಅಧಿಕಾರವನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

(3) ಗ್ರೇಟರ್ ಬೆಂಗಳೂರು ಪ್ರಾಧಿಕಾರವು, ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿನ ಎಲ್ಲಾ ನಗರ ಪಾಲಿಕೆಗಳು ಮತ್ತು ಇತರ ಏಜೆನ್ಸಿಗಳ ನಡುವೆ ಸಮನ್ವಯದ ಪಾತ್ರವನ್ನು ನಿರ್ವಹಿಸತಕ್ಕದ್ದು.

**XXX XXX XXX**

**14. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪ್ರಕಾರ್ಯಗಳು.-** ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಈ ಮುಂದಿನ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು, ಎಂದರೆ:-

(1) **ಆಡಳಿತಾತ್ಮಕ ಪ್ರಕಾರ್ಯಗಳು**: ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಸರ್ಕಾರವು ನಿರ್ಧರಿಸಿದಂತೆ ಈ ಮುಂದಿನವುಗಳನ್ನು ಒಳಗೊಂಡಂತೆ ನಗರ ಪಾಲಿಕೆಗಳ ಆಡಳಿತಾತ್ಮಕ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು ಮತ್ತು ಅಧಿಕಾರಗಳನ್ನು ಚಲಾಯಿಸತಕ್ಕದ್ದು,-

(ಎ) ನಗರ ಪಾಲಿಕೆಗಳ ಆಯುಕ್ತರೊಂದಿಗೆ ಸಮಾಲೋಚನೆ ನಡೆಸಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮತ್ತು ನಗರ ಪಾಲಿಕೆಗಳಿಗಾಗಿ ಸಾಮಾನ್ಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸುವುದು, ಹಾಗೂ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸುವುದು.

(ಬಿ) ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರು ಸಾಮಾನ್ಯ ವೃಂದ ಮತ್ತು ನೇಮಕಾತಿ ನಿಯಮಗಳಿಗನುಸಾರವಾಗಿ ಎಲ್ಲಾ ಗ್ರೂಪ್ 'ಎ' (ಕಿರಿಯ ಶ್ರೇಣಿ) ಮತ್ತು ಗ್ರೂಪ್ 'ಬಿ' ಅಧಿಕಾರಿಗಳ ನೇಮಕಾತಿಯನ್ನು ಮಾಡತಕ್ಕದ್ದು ಹಾಗೂ ಸಂಬಂಧಪಟ್ಟ ನಗರ ಪಾಲಿಕೆಗಳ ಆಯುಕ್ತರು ಗ್ರೂಪ್ ಸಿ ಮತ್ತು ಗ್ರೂಪ್ ಡಿ ಹುದ್ದೆಗಳ ನೇಮಕಾತಿಯನ್ನು ಮಾಡತಕ್ಕದ್ದು.

(ಸಿ) ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಇವರು ವೃಂದ ಮತ್ತು ನೇಮಕಾತಿ ನಿಯಮಗಳಿಗನುಸಾರವಾಗಿ ನೇಮಕಗೊಂಡ ಎಲ್ಲಾ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಹಾಗೂ ಗೇಟರ್ ಬೆಂಗಳೂರು ಪ್ರಾಧಿಕಾರ ಅಥವಾ ನಗರ ಪಾಲಿಕೆಗಳಲ್ಲಿ ಪ್ರತಿನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳಿಗೆ ಸಂಬಂಧಿಸಿದಂತೆ, ಗ್ರೂಪ್ಎ (ಕಿರಿಯ ಶ್ರೇಣಿ) ದರ್ಜೆಯ ಮತ್ತು ಗ್ರೂಪ್ಬಿ ದರ್ಜೆಯ ಅಧಿಕಾರಿ ಶಿಸ್ತು ಪ್ರಾಧಿಕಾರಿಯಾಗಿರತಕ್ಕದ್ದು.

(ಡಿ) ಸಾಮಾನ್ಯ ವೃಂದ ಮತ್ತು ನೇಮಕಾತಿ ನಿಯಮಗಳಿಗನುಸಾರ ನೇಮಕಗೊಂಡ ಮತ್ತು ಎಲ್ಲಾ ಅಧಿಕಾರಿಗಳ ಸಂಬಂಧದಲ್ಲಿ ಅಥವಾ ನಗರ ಪಾಲಿಕೆಯಲ್ಲಿ ಪ್ರತಿನಿಯೋಜನೆ ಮೇಲೆ ಸೇವೆ ಸಲ್ಲಿಸುತ್ತಿರುವ ಮತ್ತು ಗ್ರೂಪ್ ಸಿ ಹಾಗೂ ಗ್ರೂಪ್ ಡಿ ಸಿಬ್ಬಂದಿಗಳ ಸಂಬಂಧದಲ್ಲಿ ನಗರ ಪಾಲಿಕೆಯ ಆಯುಕ್ತರು ಶಿಸ್ತು ಪ್ರಾಧಿಕಾರಿಯಾಗಿರತಕ್ಕದ್ದು.

ಪರಂತು, ಗ್ರೇಟರ್ ಬೆಂಗಳೂರು ಪ್ರಾಧಿಕಾರದಲ್ಲಿ ಅಥವಾ ನಗರ ಪಾಲಿಕೆಯಲ್ಲಿ ಪ್ರತಿನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಸಂಬಂಧದಲ್ಲಿ ಸಂಬಂಧಪಟ್ಟ ಶಿಸ್ತು ಪ್ರಾಧಿಕಾರವು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ಅನುಮೋದನೆ ಪಡೆಯದೆ ಈ ಮುಂದಿನ ದಂಡನೆಯನ್ನು ವಿಧಿಸತಕ್ಕದ್ದಲ್ಲ,-

(i) ಸೇವೆಯಿಂದ ವಜಾ ಮಾಡುವುದು; ಅಥವಾ

(ii) ಸೇವೆಯಿಂದ ತೆಗೆದು ಹಾಕುವುದು; ಅಥವಾ

(iii) ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸುವುದು; ಅಥವಾ

(iv) ಕಡಿಮೆ ವೇತನ ಶ್ರೇಣಿಗೆ, ದರ್ಜೆಗೆ, ಹುದ್ದೆಗೆ ಅಥವಾ ಸೇವೆಗೆ ಇಳಿಸುವುದು.

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 500+100+20, 12ನೇ ಆಗಸ್ಟ್ 2025

**KARNATAKA LEGISLATIVE ASSEMBLY**
**SIXTEENTH LEGISLATIVE ASSEMBLY**
**SEVENTH SESSION**

# THE GREATER BENGALURU GOVERNANCE (AMENDMENT) BILL, 2025
**(LA Bill No. 58 of 2025)**

A Bill to amend the Greater Bengaluru Governance Act, 2024 (Karnataka Act No. 36 of 2025).

Whereas it is expedient to amend the Greater Bengaluru Governance Act, 2024 (Karnataka Act No.36 of 2025) for purposes hereinafter appearing:

Be it enacted by the Karnataka State Legislature in the Seventy sixth year of the Republic India as follows:-

**1. Short title commencement.-** (1) This Act may be called the Greater Bengaluru Governance (Amendment) Act, 2025.

(2) It shall come into force at once.

**2. Amendment of section 8.**- In the Greater Bengaluru Governance Act, 2024 (Karnataka Act 36 of 2025) (hereinafter referred to as the Principal Act), in section 8,for sub-section (2), the following shall be substituted, namely:-

"(2) The Greater Bengaluru Authority shall discharge such functions as per provisions of this Act."

**3. Amendment of section 14.-** In the Principal Act, in section 14, in sub-section (1), for the words "Administrative functions and powers on the administration of the City Corporations" the words "such functions", shall be substituted.

## STATEMENT OF OBJECTS AND REASONS

It is considered necessary to amend the Greater Bengaluru Governance Act, 2024 (Karnataka Act No.36 of 2025) to give clarity regarding the functions of the Greater Bengaluru Authority.

Hence, the Bill.

## FINANCIAL MEMORANDUM

There is no extra expenditure involved in the proposed legislative measure.

**D.K. SHIVAKUMAR**
DEPUTY CHIEF MINISTER

**M.K. VISHALAKSHI**
Secretary
Karnataka Legislative Assembly

## EXTRACT FROM THE GREATER BENGALURU GOVERNANCE ACT, 2024 (KARNATAKA ACT NO. 36 OF 2025)

**X XX XXX XX X**

**8. Relationship between Civic Authorities in the Greater Bengaluru Area.-** (1) The Civic Authorities in the Greater Bengaluru Area shall exercise their authority in their specific domains as per the powers and functions vested in them under this Act and the rules and regulations made thereunder.

(2) The Greater Bengaluru Authority shall exercise such authority and discharge such functions as per provisions of this Act including with respect to the City Corporations created under this Act.

(3) The Greater Bengaluru Authority shall discharge the role of coordinator among all the City Corporations and other agencies in the Greater Bengaluru Area.

**X XX XXX XX X**

**14. Functions of the Greater Bengaluru Authority.-** The Greater Bengaluru Authority shall perform the following functions, namely:-

(1) Administrative Functions: The Greater Bengaluru Authority shall exercise Administrative functions and powers on the administration of the City Corporations as decided by the Government including,–

(a) Finalise the Common Cadre and Recruitment Rules for the Greater Bengaluru Authority and the City Corporations in consultation with the Commissioners of the City Corporations, and submit to the Government for approval;

(b) Appointment of all Group A (Junior Scale) and Group B officers in accordance with the Common Cadre and Recruitment Rules shall be made by the Chief Commissioner of Greater Bengaluru Authority and for the Group C and D posts, the concerned City Corporation Commissioner;

(c) The Chief Commissioner, Greater Bengaluru Authority shall be the Disciplinary Authority with respect to all the Officers appointed as per Common Cadre and Recruitment Rules as well as all the officers working on deputation to the Greater Bengaluru Authority or the City Corporations, and who are of the rank of Group A (Junior Scale) and Group B;

(d) The Commissioners of the City Corporations shall be the Disciplinary Authority for all the officers and staff appointed under the Common Cadre and Recruitment Rules or those who are serving on deputation to the City Corporation, and are of the rank of Group C and D: Provided that in case of officers on deputation to the Greater Bengaluru Authority or to the City Corporations, the respective Disciplinary Authority shall not impose penalty of,-

(i) dismissal from service; or

(ii) removal from service; or

(iii) compulsory retirement from the service; or (iv) reduction to a lower time scale of pay, grade, post or service without approval of the Appointing Authority concerned.

**X XX XXX XX X**

Govt. Press, Vikasa Soudha, Bengalur, 12th August, 2025, P7, W.D. , Copies 500+100+20